# ಕರ್ನಾಟಕ ಸರ್ಕಾರದ ನಡವಳಿ

<u>ವಿಷಯ:</u> ಶ್ರೀ. ಮುನಿಚಿಕ್ಕಯ್ಯ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ. ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ ಕುರಿತು – ಅಂತಿಮ ಆದೇಶ ಹೊರಡಿಸುವ ಬಗ್ಗೆ – ಆದೇಶ.

<u>ಓದಲಾಗಿದೆ:</u>

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/409/ಗ್ರಾಪಂಕಾ/2014, ಬೆಂಗಳೂರು, ದಿನಾಂಕ: 30.09.2014
2. ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/INQ/14-A/555/2014/ARE-9, ದಿನಾಂಕ: 15.12.2018
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/INQ/14-A/555/2014/ARE-9, ದಿನಾಂಕ: 18.12.2018

<u>ಪ್ರಸ್ತಾವನೆ :</u>

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ. ಮುನಿಚಿಕ್ಕಯ್ಯ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು. ಆದರಂತೆ ಅಪರ ನಿಬಂಧಕರು, ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

<u>"ದೋಷಾರೋಪಣೆ":</u>

> "ನೀವು ಶ್ರೀ. ಮುನಿಚಿಕ್ಕಯ್ಯ (ಇನ್ನು ಮುಂದೆ ಆಪಾದಿತ ಸರ್ಕಾರಿ ನೌಕರ, 'ಆ.ಸ.ನೌ' ಅಥವಾ ಡಿಜಿಓ ಎಂದು ಸಂಬೋಧಿಸಲ್ಪಡುವ) ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಕೆಂಗೇರಿ ಹೋಬಳಿ ರಾಮೋಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯೆಂದು ಕಾರ್ಯನಿರ್ವಹಿಸುವಾಗ ಕೃಷಿ ಜಮೀನಿನಲ್ಲಿ ಗೃಹ ನಿರ್ಮಾಣ ಮಾಡಲು ಪರವಾನಿಗೆ ನೀಡುವ; ಸ.ಸ.90 ರಲ್ಲಿ ಅನಧಿಕೃತವಾಗಿ ನಿವೇಶನಗಳನ್ನು ಮಾಡುವ ಬಗ್ಗೆ ಖೊಟ್ಟಿ ದಾಖಲೆಗಳನ್ನು ಸೃಷ್ಟಿ ಮಾಡುವ ಮತ್ತು ಕಾನೂನಿಗೆ ವಿರುದ್ಧವಾಗಿ ಇಂಡಸ್ಟ್ರಿ ನಡೆಸಲು ಲೈಸನ್ಸ್ (ಪರವಾನಿಗೆ) ನೀಡುವ ಮತ್ತು ನಿಯಮಗಳನ್ನು ಉಲ್ಲಂಘಿಸಿ 176 ನಿವೇಶನಗಳ ಖಾತಾಗಳನ್ನು ನೀಡುವ ಕೃತ್ಯಗಳನ್ನು ಎಸಗುವ ಮೇರೆಗೆ ನಿಮ್ಮ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ಕರ್ತವ್ಯ ನಿಷ್ಠೆಯನ್ನು ಪಾಲಿಸದೆ ಮತ್ತು ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ/ದುರ್ವರ್ತನೆಯಿಂದ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ ನಿಯಮಗಳು (ನಡತೆ), 1966 3(1) (ii) ಮತ್ತು (iii) ರಡಿಯಲ್ಲಿ ಉಕ್ತವಾದ ದುರ್ನಡತೆ ಎಸಗಿದ್ದೀರಿ ಅಂತ ನಿಮ್ಮ ಮೇಲೆ ದೋಷಾರೋಪಣೆಯನ್ನು ಮಾಡಲಾಗಿದೆ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ವರದಿಯಲ್ಲಿ ಆಪಾದಿತ ನೌಕರರಾದ ಶ್ರೀ. ಮುನಿಚಿಕ್ಕಯ್ಯ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ. ಇವರ ವಿರುದ್ಧದ ಆರೋಪವು ಸಾಬೀತಾಗದಿರದ ಕಾರಣ

ಇಲಾಖಾ ವಿಚಾರಣಾ ಪ್ರಕ್ರಿಯೆಯನ್ನು ಕೈ ಬಿಡಲು ನಿರ್ಧರಿಸಿರುವುದಾಗಿ ಅಪರ ನಿಬಂಧಕರು ವಿಚಾರಣೆಗಳು-9 ರವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಅಪರ ನಿಬಂಧಕರು, ವಿಚಾರಣೆಗಳು-9 ರವರು ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಶ್ರೀ. ಮುನಿಚಿಕ್ಕಯ್ಯ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ. ಇವರ ವಿರುದ್ಧ ಆರೋಪಗಳು ಸಾಬೀತಾಗದಿರದ ಕಾರಣ ಸದರಿಯವರನ್ನು ಆರೋಪದಿಂದ ಮುಕ್ತಗೊಳಿಸಿರುತ್ತಾರೆ ಎಂದು ತಿಳಿಸಿರುವುದರಿಂದ ಸರ್ಕಾರವು ಆಪಾದಿತ ನೌಕರರ ವಿರುದ್ಧ ವಿಚಾರಣೆಯನ್ನು ಕೈಬಿಡಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/13/ಗ್ರಾಪಂಕಾ/2019, ಬೆಂಗಳೂರು, ದಿನಾಂಕ:21-03-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ. ಮುನಿಚಿಕ್ಕಯ್ಯ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ. ಇವರ ವಿರುದ್ಧ ಆರೋಪಗಳು ಸಾಬೀತಾಗದಿರದ ಕಾರಣ ಸದರಿಯವರ ವಿರುದ್ಧ ವಿಚಾರಣೆಯನ್ನು ಕೈಬಿಟ್ಟು ದೋಷಮುಕ್ತರನ್ನಾಗಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

21/3/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
7. ಶ್ರೀ. ಮುನಿಚಿಕ್ಕಯ್ಯ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.